ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 946(1327)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಬೀದರ್ ಜಿಲ್ಲೆಯ ಅರಣ್ಯ ಪ್ರದೇಶದ ಅಭಿವೃದ್ದಿ ಬಗ್ಗೆ

(ಅ) 2018-19 ರಿಂದ 2020-21ರವರೆಗೆ ಜಿಲ್ಲೆಯಲ್ಲಿ 45 ಸಾವಿರದ 616 ಹೆಕ್ಟೇರ್ ಅರಣ್ಯ ಪ್ರದೇಶವಿದ್ದು ಈ ಅರಣ್ಯ ಪ್ರದೇಶ ಅಭಿವೃದ್ದಿಪಡಿಸಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ನೆಡುತೋಪು ನಿರ್ಮಾಣ ಮತ್ತು ನಿರ್ವಹಣೆಗಾಗಿ ಬೀದರ್ ಜಿಲ್ಲೆಯಲ್ಲಿ ಅರಣ್ಯ ಇಲಾಖೆ ವತಿಯಿಂದ ಬಿಡುಗಡೆಯಾದ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೀದರ್ ನಗರದ ಸುತ್ತಮುತ್ತ ಎಷ್ಟು ಎಕರೆ ಜಮೀನು ಇದೆ; ಸರ್ವೆ ಸಂಖ್ಯೆಯೊಂದಿಗೆ ವಿಸ್ತೀರ್ಣ ಹಾಗೂ ಹಾಲಿ ಪರಿಸ್ಥಿತಿಯ ವಿವರವಾದ ಮಾಹಿತಿ ನೀಡುವುದು;

(ಈ) ಅದರಲ್ಲಿ ಎಷ್ಟು ಎಕರೆ ಜಮೀನು ಒತ್ತುವರಿಯಾಗಿದೆ; ಒತ್ತುವರಿಯಾದ ಜಮೀನಿನ ಬಗ್ಗೆ ತೆಗೆದುಕೊಂಡ ಕ್ರಮ ಹಾಗೂ ಅದರ ಸರ್ವೆ ಸಂಖ್ಯೆ ಹಾಗೂ ವಿಸ್ತೀರ್ಣದೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು;

(ಉ) 2018-19 ಹಾಗೂ 2020-21ನೇ ಸಾಲಿನವರೆಗೆ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಬಂದಿದೆ; ಅಭಿವೃದ್ದಿಗಾಗಿ ಬಂದಿರುವ ಅನುದಾನ ಎಷ್ಟು; ಖರ್ಚಾದ ಅನುದಾನವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)